# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಶೆಟ್ಟಿಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.13/ಪಿಆರ್: 08 :2020-21 ದಿನಾಂಕ: 07.08.2021

**ಮಲ್ಲಸಂದ್ರ ವಾರ್ಡ್-13ರ ವಾರ್ಡ್ ಸಭೆಯ (Ward Decentralized Traige and Emergency Response (DETER) Committee for COVID-19) ನಡವಳಿ**

ದಿ.07.08.2021 ರಂದು ಬೆಳಗ್ಗೆ 11.30 ಗಂಟೆಗೆ ಶ್ರೀ.ಎಸ್.ಎಲ್. ವಿಶ್ವನಾಥ್, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ಮಲ್ಲಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
2. ಶ್ರೀ. ಮಂಜುಗಗನ್, ಕಿರಿಯ ಆರೋಗ್ಯ ಪರಿವೀಕ್ಷಕರು, ಮಲ್ಲಸಂದ್ರ
3. ಶ್ರೀ. ಕುಮಾರ್‌ಸ್ವಾಮಿ, ತೆರಿಗೆ ಅಧಿಕಾರಿ, ಕಂದಾಯ ಇಲಾಖೆ, ಮಲ್ಲಸಂದ್ರ.
4. ಶ್ರೀ. ಗೋಪಾಲ್ ರವರು ವಾರ್ಡ್ ಸಮಿತಿ ಸದಸ್ಯರು.
5. ಶ್ರೀ. ಬೈಲಪ್ಪ ರವರು ವಾರ್ಡ್ ಸಮಿತಿ ಸದಸ್ಯರು.
6. ಶ್ರೀ ಅಶೋಕ್, ರವರು ವಾರ್ಡ್ ಸಮಿತಿ ಸದಸ್ಯರು
7. ಶ್ರೀ ಮಹಾದೇವ್ ಎಂ. ಮಾರ್ಷಲ್, ಮಲ್ಲಸಂದ್ರ.
8. ಶ್ರೀ ಬಾಲಾಜಿ ಎಂ, ಸೂಪರ್ ವೈಸರ್.
9. ಶ್ರೀ ಅಂಬರೀಶ್ ಡಿ.ಎಲ್. ವಾರ್ಡ್ ಸಮಿತಿ ಸದಸ್ಯರು

ಶ್ರೀ.ಎಸ್.ಎಲ್. ವಿಶ್ವನಾಥ್, ನೋಡೆಲ್ ಅಧಿಕಾರಿ, ವಾರ್ಡ್ ನಂ.13, ಮಲ್ಲಸಂದ್ರ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರುಗಳು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

**1. ರಸ್ತೆ ಗುಂಡಿ ಹೂಳು ತೆಗೆಯುವುದು ಹಾಗೂ ಕಸ ವಿಲೇವಾರಿ**

ವಾರ್ಡ್ ವ್ಯಾಪ್ತಿಯಲ್ಲಿ ಚರಂಡಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಹಾಗೂ ತೆರವುಗೊಳಿಸುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಗಮನ ಸೆಳೆದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ & ಟ್ರಾಕ್ಟರ್ 2 ತಂಡಗಳು ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿದರು. ನಗರದಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿದ್ದು, ತಗ್ಗು ಪ್ರದೇಶಗಳಲ್ಲಿ ಹಾನಿ ಉಂಟಾಗುವುದನ್ನು ತಡೆಯಲು ಆದ್ಯತೆಯ ಮೇಲೆ ಚರಂಡಿಗಳಲ್ಲಿನ ಹೂಳು ತೆಗೆಯಲು ಕ್ರಮವಹಿಸುವಂತೆ ಸೂಚಿಸಲಾಯಿತು.

**2. ಕಸ ವಿಲೇವಾರಿ ಬಗ್ಗೆ.**

ವಾರ್ಡ್ ವ್ಯಾಪ್ತಿಯ ಕೆಲವು ಬಡಾವಣೆಗಳಲ್ಲಿ ಕಸ ವಿಲೇವಾರಿ ಆಗದ ಬಗ್ಗೆ ಸದಸ್ಯರುಗಳ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿ ಸಭೆಯ ಗಮನಕ್ಕೆ ತಂದರು. ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮವಹಿಸಿ ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವಂತೆ ಸೂಚಿಸಲಾಯಿತು.



Scanned by CamScanner

3. ರಸ್ತೆ ಅಗೆತದ ಬಗ್ಗೆ.

ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ರಸ್ತೆ ಅಗೆದು ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿರುವ ಬಗ್ಗೆ ವಾರ್ಡ್ ಸದಸ್ಯರುಗಳು ಸಭೆಯ ಗಮನಕ್ಕೆ ತಂದರು. ನೋಡೆಲ್ ಅಧಿಕಾರಿಗಳು ಮಾತನಾಡಿ ಅನಧಿಕೃತವಾಗಿ ರಸ್ತೆ ಅಗೆಯುವವರ ವಿರುದ್ಧ ನಿಯಮಾನುಸಾರ ಕ್ರಮವಹಿಸುವಂತೆ ಹಾಗೂ ಅನುಮತಿ ಪಡೆದು ರಸ್ತೆ ಅಗೆದಿದಲ್ಲಿ ಸರಿಯಾಗಿ **(as per technical specification)** ಪುನರ್ ನಿರ್ಮಿಸಿರುವ **(restoration)** ಬಗ್ಗೆ ಪರಿಶೀಲಿಸುವಂತೆ ತಿಳಿಸಿದರು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 13, ಮಲ್ಲಸಂದ್ರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Vishwanath S L 7/8/2024
**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.13, ಮಲ್ಲಸಂದ್ರ**
**ಮತ್ತು ತಹಶೀಲ್ದಾರ್, ಉಪ ಆಯುಕ್ತರು(ಭೂಸ್ವಾಧೀನ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶೆ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ಶೆ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 13 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಛೇರಿ ಪ್ರತಿ.



Scanned by CamScanner